ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ. ಮಲ್ಲೇಶ್ವರಂ. ಬೆಂಗಳೂರು

****************************************************************************************

ಸಂಖ್ಯೆ : ಗಣಕಶಾಖೆ/ಎಸ್.ಎಸ್.ಎಲ್.ಸಿ ಮೌಲ್ಯಮಾಪನ/01/2019-20 ದಿನಾಂಕ:06/12/2019

06/12/19

- ಸುತ್ತೋಲೆ -

ವಿಷಯ: ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಮಾಹಿತಿಯನ್ನು 2020ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯಕ್ಕಾಗಿ ಆನ್‌ಲೈನ್‌ನಲ್ಲಿ ನೋಂದಣಿ ಮಾಡುವ ಬಗ್ಗೆ.

*****

ರಾಜ್ಯದ ಎಲ್ಲಾ ಸರ್ಕಾರಿ, ಮಾನ್ಯತೆ ಪಡೆದಿರುವ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರು ತಮ್ಮ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ವಿವರಗಳನ್ನು ಏಪ್ರಿಲ್ 2020ರ ಎಸ್.ಎಸ್.ಎಲ್.ಸಿ ಪರೀಕ್ಷಾ ಮೌಲ್ಯಮಾಪನ ಕಾರ್ಯಕ್ಕಾಗಿ ಶಾಲಾ ಲಾಗಿನ್‌ನಲ್ಲಿ ಆನ್‌ಲೈನ್ ಮೂಲಕ ನೋಂದಾಯಿಸಲು ದಿನಾಂಕ 06.12.2019ರಿಂದ ಅವಕಾಶ ಕಲ್ಪಿಸಲಾಗಿದೆ. ಶಾಲೆಯ ಮುಖ್ಯ ಶಿಕ್ಷಕರು ತಮ್ಮನ್ನು ಸೇರಿದಂತೆ ಶಾಲೆಯ ಎಲ್ಲಾ ಶಿಕ್ಷಕರನ್ನು ಮೌಲ್ಯಮಾಪನ ಕಾರ್ಯಕ್ಕೆ ನೋಂದಾಯಿಸುವುದು ಹಾಗೂ 2018-19ನೇ ಸಾಲಿನಲ್ಲಿ ನೋಂದಾಯಿಸಿದ ಶಿಕ್ಷಕರ ವಿವರಗಳನ್ನೂ ಕೂಡ ಅಪ್‌ಡೇಟ್ ಮಾಡುವುದು ಕಡ್ಡಾಯವಾಗಿರುತ್ತದೆ.

2019-20ನೇ ಶೈಕ್ಷಣಿಕ ವರ್ಷದಲ್ಲಿ ಹೊಸದಾಗಿ ನೇಮಕಾತಿ, ಬಡ್ತಿ ಮತ್ತು ವರ್ಗಾವಣೆಯಿಂದ ಕರ್ತವ್ಯಕ್ಕೆ ಹಾಜರಾದ ಶಿಕ್ಷಕರ ವಿವರಗಳನ್ನು ಶಾಲಾ ಲಾಗಿನ್ Evaluator Details ನ Evaluators New Registration ನಲ್ಲಿ ನೋಂದಾಯಿಸುವುದು ಮತ್ತು 2018-19ನೇ ಸಾಲಿನಲ್ಲಿ ನೋಂದಾಯಿಸಿದ ಶಿಕ್ಷಕರ ವಿವರಗಳನ್ನು ಶಾಲಾ ಲಾಗಿನ್ Evaluator Details ನ Update Evaluators Detailsನಲ್ಲಿ ಅಪ್‌ಡೇಟ್ ಮಾಡುವುದು. 2019-20ನೇ ಶೈಕ್ಷಣಿಕ ವರ್ಷದಲ್ಲಿ ತಮ್ಮ ಶಾಲೆಯಿಂದ ವರ್ಗಾವಣೆ, ನಿವೃತ್ತಿ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಶಿಕ್ಷಕರು ಕಾರ್ಯನಿರ್ವಹಿಸುತ್ತಿಲ್ಲವಾದರೆ ಅಂತಹ ಶಿಕ್ಷಕರ ವಿವರಗಳನ್ನು Update Evaluators Details ನಲ್ಲಿ ಸೂಕ್ತ ಕಾರಣಗಳೊಂದಿಗೆ Delete ಮಾಡುವುದು.

ಸದರಿ ನೋಂದಣಿ ಪ್ರಕ್ರಿಯೆಯನ್ನು ಈ ಕೆಳಕಂಡ ಮಾಹಿತಿಗಳೊಂದಿಗೆ ನಿರ್ವಹಿಸುವುದು.

1. ಶಿಕ್ಷಕರ ಹೆಸರು & ಪದನಾಮ
2. ಜನ್ಮ ದಿನಾಂಕ
3. ಸೇವೆಗೆ ಸೇರಿದ ದಿನಾಂಕ ( ಸರ್ಕಾರಿ ಪ್ರೌಢಶಾಲೆಗಳಲ್ಲಿ ಪ್ರೌಢಶಾಲಾ ಶಿಕ್ಷಕರಿಗೆ ಸೇವೆಗೆ ಸೇರಿದ ದಿನಾಂಕವನ್ನು, ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಬಡ್ತಿ ಹೊಂದಿದ ಶಿಕ್ಷಕರಿಗೆ, ಪ್ರೌಢಶಾಲೆಗೆ ಕರ್ತವ್ಯಕ್ಕೆ ಹಾಜರಾದ ದಿನಾಂಕವನ್ನು, ಅನುದಾನಿತ ಪ್ರೌಢಶಾಲೆಗಳಲ್ಲಿ ಶಿಕ್ಷಕರು ಅನುದಾನಕ್ಕೆ ಒಳಪಟ್ಟ ದಿನಾಂಕವನ್ನು ಮತ್ತು ಅನುದಾನರಹಿತ ಪ್ರೌಢಶಾಲೆಗಳಲ್ಲಿ ಆ ಶಾಲೆಗೆ ಕರ್ತವ್ಯಕ್ಕೆ ಸೇರಿದ ದಿನಾಂಕವನ್ನು ಸೇವೆಗೆ ಸೇರಿದ ದಿನಾಂಕವೆಂದು ಪರಿಗಣಿಸುವುದು)
4. ಪ್ರಸ್ತುತ ಶಾಲೆಗೆ ಕರ್ತವ್ಯಕ್ಕೆ ಹಾಜರಾದ ದಿನಾಂಕ
5. ವಿದ್ಯಾರ್ಹತೆ, ಬೋಧನಾ ವಿಷಯ ಮತ್ತು ಮಾಧ್ಯಮ
6. ಪ್ರಥಮ ಕೆ.ಜಿ.ಐ.ಡಿ ಸಂಖ್ಯೆ ( ಸರ್ಕಾರಿ ಶಾಲಾ ಶಿಕ್ಷಕರಿಗಾಗಿ). ಪ್ರಥಮ ಎಲ್.ಐ.ಸಿ ಸಂಖ್ಯೆ (ಅನುದಾನಿತ ಶಾಲಾ ಶಿಕ್ಷಕರಿಗಾಗಿ) ಆಧಾರ್ / ವರ್ಚುಯ್ಯಲ್ ಆಧಾರ್ ಸಂಖ್ಯೆ ( ಖಾಸಗಿ ಅನುದಾನ ರಹಿತ ಶಾಲಾ ಶಿಕ್ಷಕರಿಗಾಗಿ)
7. ಬ್ಯಾಂಕ್ ಖಾತೆಯ ವಿವರಗಳು
8. ಶಿಕ್ಷಕರ ಫೋಟೋ ಮತ್ತು ಸಹಿ ( ಫೋಟೋ 60-80KB, ಸಹಿ 40-50KB ಅಳತೆಯ jpeg/jpg ನಮೂನೆಯಲ್ಲಿ ಸ್ಕ್ಯಾನ್ ಮಾಡಿ ಸೇವ್ ಮಾಡಿ ಇಟ್ಟುಕೊಳ್ಳುವುದು.)

ಮುಖ್ಯ ಶಿಕ್ಷಕರು, ಶಿಕ್ಷಕರನ್ನು ನೋಂದಾಯಿಸುವಾಗ ಮೌಲ್ಯಮಾಪನದ ವಿಷಯ ಮತ್ತು ಅವುಗಳ ವಿಷಯ ಸಂಕೇತಗಳನ್ನು ಸರಿಯಾಗಿ ಗಮನಿಸಿಕೊಂಡು ನೋಂದಾಯಿಸುವುದು. ಅಂದರೆ ತಮ್ಮ ಶಾಲೆಯಲ್ಲಿ ಶಿಕ್ಷಕರು ಬೋಧಿಸುತ್ತಿರುವ ಪ್ರಥಮ ಭಾಷೆ, ದ್ವಿತೀಯ ಭಾಷೆ, ತೃತೀಯ ಭಾಷೆಗಳನ್ನು ಮತ್ತು ಕೋರ್ ವಿಷಯಗಳಾದ ಗಣಿತ, ವಿಜ್ಞಾನ ಮತ್ತು ಸಮಾಜ ವಿಜ್ಞಾನ ವಿಷಯದ ಬೋಧನಾ ಮಾಧ್ಯಮವನ್ನು ಖಚಿತಪಡಿಸಿಕೊಂಡು ನೋಂದಾಯಿಸುವುದು. ಕಳೆದ ವರ್ಷ ಪ್ರಥಮ ಭಾಷೆ ಕನ್ನಡ ಶಿಕ್ಷಕರನ್ನು ತೃತೀಯ ಭಾಷೆ ಕನ್ನಡ ವಿಷಯಕ್ಕೆ, ದ್ವಿತೀಯ ಭಾಷೆ ಇಂಗ್ಲೀಷ್ ಶಿಕ್ಷಕರನ್ನು ಪ್ರಥಮ ಭಾಷೆ ಇಂಗ್ಲೀಷ್ ವಿಷಯಕ್ಕೆ ತಪ್ಪಾಗಿ ನೋಂದಾಯಿಸಿರುವುದು ಮಂಡಳಿಯ ಗಮನಕ್ಕೆ ಬಂದಿರುತ್ತದೆ. ಹಾಗಾಗಿ ಮೌಲ್ಯಮಾಪನಕ್ಕೆ ವಿಷಯಗಳನ್ನು ನೋಂದಾಯಿಸುವಾಗ ಬೋಧನಾ ವಿಷಯ ಮತ್ತು ಮಾಧ್ಯಮಗಳನ್ನು ಪರಿಶೀಲಿಸಿಕೊಂಡು ನೋಂದಾಯಿಸುವುದು.

ಸದರಿ ವರ್ಷ NSQF ಮತ್ತು JTS ವಿಷಯಗಳನ್ನು ಬೋಧಿಸುತ್ತಿರುವ ಶಿಕ್ಷಕರನ್ನೂ ಕೂಡ ಏಪ್ರಿಲ್ 2020ರ ಮೌಲ್ಯಮಾಪನಕ್ಕೆ ಆನ್‌ಲೈನ್‌ನಲ್ಲಿ ನೋಂದಾಯಿಸುವುದು ಕಡ್ಡಾಯವಾಗಿರುತ್ತದೆ. ಆದ ಕಾರಣ ತಮ್ಮ ಶಾಲೆಯಲ್ಲಿ NSQF ಅಥವಾ JTS ವಿಷಯಗಳನ್ನು ಬೋಧಿಸುತ್ತಿದ್ದಲ್ಲಿ ಅಂತಹ ಶಿಕ್ಷಕರನ್ನೂ ಕೂಡ ಮೌಲ್ಯಮಾಪನ ಕಾರ್ಯಕ್ಕೆ ನೋಂದಾಯಿಸುವುದು.

ಶಿಕ್ಷಕರ ವಿವರಗಳನ್ನು ಮೌಲ್ಯಮಾಪನ ಕಾರ್ಯಕ್ಕಾಗಿ ನೋಂದಾಯಿಸಿದ ನಂತರ ಜನರೇಟ್ ಆಗುವ ಶಿಕ್ಷಕರ Evaluator's Individual Registration Reportನ್ನು ಪ್ರತಿ ಶಿಕ್ಷಕರಿಗೆ ನೀಡಿ ವಿವರಗಳನ್ನು ಶಿಕ್ಷಕರಿಂದ ಪರಿಶೀಲಿಸಿಕೊಂಡು, ವಿವರಗಳು ಸಮರ್ಪಕವಾಗಿರುವುದನ್ನು ದೃಢೀಕರಿಸಿಕೊಂಡ ನಂತರ Freeze ಮಾಡುವುದು. ಒಂದು ವೇಳೆ ಈ ಹಂತದಲ್ಲಿ ಏನಾದರೂ ಲೋಪದೋಷಗಳಾಗಿದ್ದಲ್ಲಿ, ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಗೊಂದಲ ಉಂಟಾಗುತ್ತದೆ. ಇದಕ್ಕೆ ಮುಖ್ಯಶಿಕ್ಷಕರೇ ನೇರ ಹೊಣೆಗಾರರಾಗಿರುತ್ತೀರಿ.

ಫಲಿತಾಂಶ ಪ್ರಕಟಗೊಂಡ ನಂತರ ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ನಡೆಯುವ ಮರುಮೌಲ್ಯಮಾಪನ ಕಾರ್ಯಕ್ಕೆ ಶಿಕ್ಷಕರ ಅಭಿಪ್ರಾಯವನ್ನು ಕೇಳಿದ್ದು, ಸಂಬಂಧಿಸಿದ ವಿಷಯ ಶಿಕ್ಷಕರು ಹಾಜರಾಗುವ ಬಗ್ಗೆ ಅವರ ಅಭಿಪ್ರಾಯವನ್ನು ಪಡೆದು ತಂತ್ರಾಂಶದಲ್ಲೇ ದಾಖಲಿಸಬಹುದಾಗಿದೆ.

ಎಲ್ಲಾ ಶಿಕ್ಷಕರನ್ನು ಮೌಲ್ಯಮಾಪನಕ್ಕೆ ನೋಂದಾಯಿಸಿದ ವಿವರಗಳನ್ನು ದಿನಾಂಕ. 31.12.2019ರೊಳಗೆ Freeze ಮಾಡುವುದು. Freeze ಮಾಡಿದ ನಂತರ ಜನರೇಟ್ ಆಗುವ Consolidated Report of Registered Evaluators-April 2020ನ್ನು ಮುಖ್ಯ ಶಿಕ್ಷಕರು ದೃಢೀಕರಿಸಿ ದಿನಾಂಕ 10.01.2020 ರೊಳಗಾಗಿ ಮಂಡಳಿಯ ತಮ್ಮ ಜಿಲ್ಲೆಗೆ ಸಂಬಂಧಿಸಿದ ಶಾಖಾಧಿಕಾರಿಗಳಿಗೆ ಸಲ್ಲಿಸುವುದು. ಈ ಹಾರ್ಡ್‌ಕಾಪಿಯಲ್ಲಿ ಶಾಲೆಯಲ್ಲಿ ಒಂದು ವೇಳೆ ಯಾವುದೇ ಹುದ್ದೆ ಖಾಲಿ ಇದ್ದಲ್ಲಿ ನಮೂದಿಸಿ ಕಳುಹಿಸುವುದು.

| ಕ್ರ.ಸಂ | ಖಾಲಿ ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ | ಯಾವ ದಿನಾಂಕದಿಂದ ಹುದ್ದೆ ಖಾಲಿ ಇದೆ? |
|---|---|---|---|
| | | | |

**<u>ಏಪ್ರಿಲ್ 2020ರ ಎಸ್.ಎಸ್.ಎಲ್.ಸಿ ಪರೀಕ್ಷಾ ಮೌಲ್ಯಮಾಪನ ಕಾರ್ಯಕ್ಕೆ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲಾ ಶಿಕ್ಷಕರ ನೋಂದಾವಣೆ ಕಡ್ಡಾಯವಾಗಿರುತ್ತದೆ.</u>** ಒಂದು ವೇಳೆ ಮೌಲ್ಯಮಾಪನ ಕಾರ್ಯಕ್ಕೆ ನೋಂದಾಯಿಸದೇ ಇದ್ದಲ್ಲಿ ಅಂತಹ ಶಾಲಾ ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳನ್ನು ತಡೆಹಿಡಿಯಲಾಗುವುದು ಮತ್ತು ಅಂತಹ ಶಾಲಾ ಮುಖ್ಯಸ್ಥರ ವಿರುದ್ಧ ಶಿಸ್ತುಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು.

(ಸುಮಂಗಲ. ವಿ) 6/12/19
ನಿರ್ದೇಶಕರು (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರು ಈ ಕಾರ್ಯಕ್ಕಾಗಿ ಈಗಾಗಲೇ ನೀಡಿರುವ User Name ಮತ್ತು Password ಗಳನ್ನು ಬಳಸಿಕೊಂಡು ತಮ್ಮ ಜಿಲ್ಲೆಯ ಎಲ್ಲಾ ಶಾಲೆಗಳು ಮೌಲ್ಯಮಾಪನ ಕಾರ್ಯಕ್ಕೆ ನೋಂದಾಯಿಸಲು ಕ್ರಮವಹಿಸುವುದು.
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ